ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಏಯೋ/08/ಕೌಅಕೇ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:13-06-2017.

# ಸುತ್ತೋಲೆ

**ವಿಷಯ:** ಎಲ್ಲ ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಯೋಜನೆಗಳು ಮತ್ತು ಸೌಲಭ್ಯಗಳ ಕುರಿತು ಮಾಹಿತಿ ಒದಗಿಸುವ ಕುರಿತು.

**ಉಲ್ಲೇಖ :** ದಿನಾಂಕ: 07-06-2017ರ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಪತ್ರ

******

**ಪೀಠಿಕೆ :** ಕರ್ನಾಟಕ ರಾಜ್ಯವನ್ನು ಕೌಶಲ್ಯಭರಿತ ರಾಜ್ಯವನ್ನಾಗಿ ಪರಿವರ್ತಿಸಿ ನಿರುದ್ಯೋಗ ನಿವಾರಣೆ ಮಾಡುವ ಘನ ಉದ್ದೇಶದಿಂದ ರಾಜ್ಯ ಸರ್ಕಾರ ಸನ್ಮಾನ್ಯ ಮುಖ್ಯಮಂತ್ರಿಗಳ ಮಾರ್ಗದರ್ಶನದಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಮೂಲಕ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಕರ್ನಾಟಕ ರಾಜ್ಯವು ಇಡೀ ದೇಶದಲ್ಲೇ ಅತಿ ಹೆಚ್ಚು ಸಂಖ್ಯೆಯ ಯುವಜನತೆಯನ್ನು ಹೊಂದಿರುವ ರಾಜ್ಯವಾಗಿದ್ದರೂ ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಅತ್ಯಗತ್ಯವಾದ ಉದ್ಯೋಗ ಮಾಹಿತಿ, ಸೃಜನ ಶೀಲತೆ, ಕೌಶಲ್ಯ ತರಬೇತಿ ಇನ್ನಿತರ ವಿಚಾರಗಳಿಂದ ಲಕ್ಷಾಂತರ ವಿದ್ಯಾರ್ಥಿಗಳು ವಂಚಿತರಾಗುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೌಶಲ್ಯ ಕೇಂದ್ರಗಳನ್ನು ತೆರೆಯುವ ಮೂಲಕ ಈ ಪರಿಸ್ಥಿತಿಯನ್ನು ಸುಧಾರಣೆಗೊಳಿಸಿ, ಸರ್ಕಾರದ ವತಿಯಿಂದ ಜಾರಿಗೊಳ್ಳುತ್ತಿರುವ ಅತ್ಯಂತ ಪ್ರಾಯೋಗಿಕವೂ, ವಿನೂತನವೂ ಸೃಜನಾತ್ಮಕವೂ ಆದ ಹಲವು ಉದ್ಯೋಗಪರ ಯೋಜನೆಗಳ ಕುರಿತು ಸವಿವರವಾದ ಮಾಹಿತಿಯನ್ನು ಯುವಜನರಿಗೆ ತಲುಪಿಸುವ ಉದ್ದೇಶವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಹೊಂದಿದೆ.

**ಕೌಶಲ್ಯ ಅಭಿವೃದ್ಧಿ ಕೇಂದ್ರಗಳ ಕಾರ್ಯವಿವರ :** ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದೊಡನೆ ಎಲ್ಲ ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದೆ. ಇವುಗಳ ಮೂಲಕ ವಿದ್ಯಾರ್ಥಿಗಳ ಉದ್ಯೋಗಾವಕಾಶಗಳನ್ನು ವರ್ಧಿಸುವುದಕ್ಕಾಗಿ ವೃತ್ತಿ ಮಾರ್ಗದರ್ಶನ, ಸಂವಹನ ಕಲೆ, ವ್ಯಕ್ತಿತ್ವ ವಿಕಸನ, ಕಂಪ್ಯೂಟರ್ ತರಬೇತಿ, ಮೌಲ್ಯ ಶಿಕ್ಷಣ ಹಾಗೂ ಆಪ್ತ ಸಮಾಲೋಚನೆ, 'ಭಾರತೀಯ ಸೇನೆಯಲ್ಲಿ ಕನ್ನಡಿಗರು' ಕಾರ್ಯಕ್ರಮದಡಿಯಲ್ಲಿ ಸೇನಾ ನೇಮಕಾತಿ ಪೂರ್ವ ತರಬೇತಿ ಹಾಗೂ ಉದ್ಯೋಗಾಧಾರಿತ ಕೌಶಲ್ಯ ತರಬೇತಿಯನ್ನು ಏರ್ಪಡಿಸುವ ಮೂಲಕ ವಿದ್ಯಾರ್ಥಿಗಳ ಸಬಲೀಕರಣವನ್ನು ಸಾಧಿಸಲು ಪ್ರಸ್ತಾಪಿಸಲಾಗಿದೆ.

ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಕೌಶಲ್ಯ ಅಭಿವೃದ್ಧಿ ಕೇಂದ್ರಗಳ ಮೂಲಕ ಯುವಸಮುದಾಯಕ್ಕಾಗಿ ಈಡೇರಿಸಲು ಉದ್ದೇಶಿಸಲಾಗಿರುವ ಕಾರ್ಯಕ್ರಮಗಳ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ:

- **ಕೌಶಲ್ಯ ಜಾಗೃತಿ ಅಭಿಯಾನ** – ಎಲ್ಲ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ.
- **Techno Language Skill-** ಜಪಾನೀಸ್, ಜರ್ಮನ್ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ತರಬೇತಿ.
- **ಯುವ ಸಬಲೀಕರಣ** – ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಉದ್ಯಮಪೂರಕ ತರಬೇತಿ.
- **ಕೌಶಲ್ಯ ಕೇಂದ್ರ** – ಜಿಲ್ಲಾ ಕೇಂದ್ರಗಳಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳ ಪುನಶ್ಚೇತನ.

- **ಮಹಿಳಾ ಸಬಲೀಕರಣ** – ಮಹಿಳೆಯರಿಗೆ ವಾಹನ ಚಾಲನಾ ತರಬೇತಿ ಮತ್ತು ವಾಹನ ಖರೀದಿಗೆ ಸಹಕಾರ.
- **ಕೌಶಲ್ಯ ಮಹಿಳೆ** – ಸಂಚಾರಿ ತರಬೇತಿ ವಾಹನಗಳಲ್ಲಿ ಕೋಚಿಂಗ್ ಮತ್ತು ನಿರಾಶ್ರಿತ ಮಹಿಳೆಯರಿಗೆ ತರಬೇತಿ.
- **ಕೌಶಲ್ಯ ಪಾರ್ಕ್** – ನಿರುದ್ಯೋಗಿ ಯುವಕ-ಯುವತಿಯರಿಗೆ ತರಬೇತಿ ನೀಡುವುದಕ್ಕಾಗಿ ತುಮಕೂರಿನಲ್ಲಿ ಸ್ಥಾಪನೆ.
- **ಭಾರತದ ಸೇನೆಯಲ್ಲಿ ಕನ್ನಡಿಗರು** – ಕನ್ನಡಿಗ ಯುವಜನರಿಗೆ ನೇಮಕಾತಿ ಪೂರ್ವ ತರಬೇತಿ.
- **ಯಶಸ್ವಿ ಉದ್ಯೋಗ ಮೇಳಗಳು** – ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಹಮ್ಮಿಕೊಳ್ಳಲಾಗುವುದು.
- **ವಿದೇಶ ಉದ್ಯೋಗಕೋಶ ಸ್ಥಾಪನೆ** – ಅಂತರ ರಾಷ್ಟ್ರೀಯ ಮಟ್ಟದ ತರಬೇತಿ ನೀಡುವ ಮೂಲಕ ವಿದೇಶಗಳಲ್ಲಿ ಉದ್ಯೋಗ ಪಡೆಯಲು ನೆರವು.

ಈ ಹಿನ್ನೆಲೆಯಲ್ಲಿ ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜಿನಲ್ಲಿ ಒಂದು ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲು ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಸದರಿ ಕೇಂದ್ರವು ಉದ್ದೇಶಿತ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗುವಂತೆ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕಾಲೇಜಿನ ಒಬ್ಬರು ಅಥವಾ ಇಬ್ಬರು ಅಧ್ಯಾಪಕರನ್ನು ನೋಡಲ್ ಆಫೀಸರ್‌ಗಳನ್ನಾಗಿ ನೇಮಿಸಿ, ಅವರ ಹೆಸರು, ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ವಿಳಾಸವನ್ನು ಈ ಸುತ್ತೋಲೆಯೊಡನೆ ಲಗತ್ತಿಸಿರುವ ನಮೂನೆ-1ರಲ್ಲಿ (ಎಕ್ಸೆಲ್ ಫಾರ್ಮ್ಯಾಟ್‌ನಲ್ಲಿ) ಭರ್ತಿ ಮಾಡಿ, ಇದರ ಸಾಫ್ಟ್ ಪ್ರತಿಯನ್ನು ದಿ: 20-06-2017ರೊಳಗೆ naipunyanidhi.dce@gmail.com ಗೆ ಕಳುಹಿಸತಕ್ಕದ್ದು.

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು.**

ಇವರಿಗೆ:

1) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
3) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಕಲುಬುರ್ಗಿ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಶಿಇ, ಬೆಂಗಳೂರು – ಇಲಾಖಾ ವೆಬ್ ಸೈಟಿನಲ್ಲಿ ಪ್ರಕಟಿಸಲು.
5) ಕಛೇರಿ ಪ್ರತಿ.

Annexure - 01

GOVERNMENT OF KARNATAKA
DEPARTMENT OF COLLEGIATE EDUCATION

# SKILL DEVELOPMENT PROGRAMME 2017-18

Name of the College:

College Mail ID:

Name of Principal :

Principal's Mail ID:

Principal's Mobile No.:

| Sl. No. | Name of the Nodal Officer | Nodal Officer Mobile No.: | Nodal Officer Mail ID: | Siganature |
|---|---|---|---|---|
| | | | | |
| | | | | |
| | | | | |
| | | | | |

Signature of the Principal